# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 476 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19-07-2024 |
| ಉತ್ತರಿಸುವ ಸಚಿವರು | : | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯ ಸರ್ಕಾರದ ವತಿಯಿಂದ ಸ್ಥಾಪಿಸಲಾಗಿರುವ 'ಕಾಡುಗೊಲ್ಲ ಅಭಿವೃದ್ಧಿ ನಿಗಮ ನಿಯಮಿತ' ಸಂಸ್ಥೆಗೆ ಅಧ್ಯಕ್ಷರನ್ನು ನೇಮಿಸಲಾಗಿದೆಯೇ;</td><td rowspan="2">ಹೌದು.<br><br>ಸರ್ಕಾರದ ಆದೇಶ ಸಂಖ್ಯೆ: ಹಿಂವಕ 178 ಬಿಸಿಎ 2023, ದಿನಾಂಕ:14-06-2023ರನ್ವಯ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರನ್ನು ಕಾಡುಗೊಲ್ಲ ಅಭಿವೃದ್ಧಿ ನಿಗಮದ ಅಧ್ಯಕ್ಷರನ್ನಾಗಿ ನೇಮಿಸಲಾಗಿರುತ್ತದೆ.</td></tr>
<tr><td>ಆ)</td><td>ಇಲ್ಲವಾದಲ್ಲಿ, ಸದರಿ ಸಂಸ್ಥೆಗೆ ಕಾಡುಗೊಲ್ಲ ಸಮುದಾಯದ ಏಳಿಗೆಗಾಗಿ ವ್ಯಕ್ತಿಯನ್ನೇ ಅಧ್ಯಕ್ಷ ಸ್ಥಾನಕ್ಕೆ ನೇಮಿಸಲಾಗುವುದೇ: ಹಾಗೂ ಈ ಕಾರ್ಯ ಯಾವಾಗ ಪೂರ್ಣಗೊಳ್ಳುವುದು: (ಮಾಹಿತಿ ನೀಡುವುದು)</td></tr>
<tr><td>ಇ)</td><td>ಕಾಡುಗೊಲ್ಲ ಅಭಿವೃದ್ಧಿ ನಿಗಮಕ್ಕೆ ಮೀಸಲಪ್ಪಟ್ಟರುವ ಒಟ್ಟು ಹಣವೆಷ್ಟು;</td><td>ಕಾಡುಗೊಲ್ಲ ಅಭಿವೃದ್ಧಿ ನಿಗಮಕ್ಕೆ ಮೀಸಲಿಟ್ಟ ಅನುದಾನದ ವಿವರ ಈ ಕೆಳಕಂಡಂತಿದೆ.<br>(ರೂ.ಕೋಟಿಗಳಲ್ಲಿ)
<table>
<tr><th>ಕ್ರ. ಸಂ.</th><th>ವರ್ಷ</th><th>ಮೀಸಲಿಟ್ಟ ಅನುದಾನ</th><th>ಬಿಡುಗಡೆಯಾದ ಅನುದಾನ</th></tr>
<tr><td>01</td><td>2022-23</td><td>20.00</td><td>20.00</td></tr>
<tr><td>02</td><td>2023-24</td><td>15.00</td><td>15.00</td></tr>
<tr><td>03</td><td>2024-25</td><td>15.00</td><td>-</td></tr>
<tr><td></td><td>ಒಟ್ಟು</td><td>50.00</td><td>35.00</td></tr>
</table>
</td></tr>
<tr><td>ಈ)</td><td>ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ ಕಾಡುಗೊಲ್ಲರ ಅಭಿವೃದ್ಧಿಗಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ ಮತ್ತು ಎಷ್ಟು ಫಲಾನುಭವಿಗಳು ಈ ನಿಗಮದಿಂದ ಸಹಾಯ ಪಡೆದುಕೊಂಡಿದ್ದಾರೆ? (ವಿವರ ನೀಡುವುದು)</td><td>ಕಂಪನಿಗಳ ಅಧಿನಿಯಮ, 2013ರಡಿ ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮವನ್ನು ದಿನಾಂಕ: 20-12-2023 ರಂದು ನೋಂದಣಿ ಮಾಡಲಾಗಿರುತ್ತದೆ.<br><br>ದಿನಾಂಕ:03-01-2024ರಂದು ನಿಗಮದ ಮೊದಲನೇ ನಿರ್ದೇಶಕ ಮಂಡಳಿ ಸಭೆಯಲ್ಲಿ ಯೋಜನೆಗಳನ್ನು ರೂಪಿಸುವ ಬಗ್ಗೆ ಚರ್ಚಿಸಿ, 2022-23 ಹಾಗೂ 2023-24ನೇ ಸಾಲಿಗೆ ಒಟ್ಟು ರೂ.35.00 ಕೋಟಿಗಳು ಹಾಗೂ 2024-25ನೇ ಸಾಲಿಗೆ ರೂ.15.00 ಕೋಟಿಗಳ ಅನುದಾನವನ್ನು ನಿಗದಿಪಡಿಸಲಾಗಿದೆ. ಒಟ್ಟು ರೂ.50.00 ಕೋಟಿಗಳ ಅನುದಾನದಲ್ಲಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ದಿನಾಂಕ:28-06-2024ರಂದು ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿರುತ್ತದೆ.<br><br>ನಿಗಮದಲ್ಲಿನ ವಿವಿಧ ಯೋಜನೆಗಳಿಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲು ಕ್ರಮ ಕೈಗೊಳ್ಳಲಾಗಿದೆ.</td></tr>
</table>

**ಸಂಖ್ಯೆ:ಹಿಂವಕ 194 ಬಿಸಿಎ 2024**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು